**APRIL 30. 2025**

**ALL INDIA RADIO- DHARWAD**

**PRADESH SAMACHARA (KANNADA) 07.05AM**

**ಮುಖ್ಯಾಂಶಗಳು:**

- **ಗ್ರಾಮ ಆಡಳಿತಾಧಿಕಾರಿಗಳು ರೈತರ ಹಿತ ಕಾಯುವುದು ಕರ್ತವ್ಯ– ಮುಖ್ಯಮಂತ್ರಿ ಸಿದ್ದರಾಮಯ್ಯ.**

- **ಭೂ ಸುರಕ್ಷಾ ಯೋಜನೆಯಡಿ 19 ಕೋಟಿಗೂ ಹೆಚ್ಚು ಪುಟಗಳ ಭೂ ದಾಖಲೆಗಳ ಡಿಜಿಟಲೀಕರಣ.**

- **ಇಂದು, ಕರ್ನಾಟಕದ ಸಾಂಸ್ಕೃತಿಕ ನಾಯಕ ಜಗಜ್ಯೋತಿ ಶ್ರೀ ಬಸವೇಶ್ವರರ ಜಯಂತಿ ಹಾಗೂ ಅಕ್ಷಯ ತೃತೀಯಾ ಪರ್ವ.**

- **ದೇಶದ ಭದ್ರತೆಯ ವಿಚಾರದಲ್ಲಿ ಯಾವುದೇ ರಾಜಿ ಇಲ್ಲ – ಸಚಿವ ಡಾಕ್ಟರ್ ಜಿ.ಪರಮೇಶ್ವರ.**

**ವಾರ್ತೆಗಳ ವಿವರ...**

<><><>

**ಕೃಷಿಯೇ ದೇಶದ ಬೆನ್ನಲಬು. ನಮ್ಮ ದೇಶ ಹಳ್ಳಿಗಳಿಂದ ಕೂಡಿದೆ. ನಾವೆಲ್ಲರೂ** ಹಳ್ಳಿಗಳಿಂದ ಬಂದಿದ್ದೇವೆ. ಹಳ್ಳಿಗಳಲ್ಲಿ ಶೇಕಡ 60 ರಷ್ಟು ಜನ ರೈತರಿದ್ದಾರೆ. ಅವರ ಹಿತ ಕಾಯುವುದು ನಮ್ಮ ಕರ್ತವ್ಯ. ಅವರಿಗೆ ತೊಂದರೆ ಆಗದಂತೆ ಕಾರ್ಯ ನಿರ್ವಹಿಸಬೇಕು. ಎಂದು ನೂತನವಾಗಿ ನೇಮಕಾತಿ ಹೊಂದಿರುವ ಗ್ರಾಮ ಆಡಳಿತಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕಂದಾಯ ಇಲಾಖೆಯ ವತಿಯಿಂದ ವಿಧಾನಸೌಧ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ನೂತನವಾಗಿ ಆಯ್ಕೆಯಾಗಿರುವ 1000 ಗ್ರಾಮ ಆಡಳಿತ ಅಧಿಕಾರಿಗಳಿಗೆ ನೇಮಕಾತಿ ಆದೇಶ ವಿತರಣೆ, ಅಭಿಶಿಕ್ಷಣ ತರಬೇತಿ ಮತ್ತು 4 ಸಾವಿರ ಗೂಗಲ್ ಲ್ಯಾಪ್ ಟಾಪ್ ವಿತರಣೆ ಹಾಗೂ ಸಾಧನೆಯ ಹಾದಿಯಲ್ಲಿ ಪುಸ್ತಕ ಬಿಡುಗಡೆ ಸಮಾರಂಭದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗೆ ರಾಜ್ಯದಲ್ಲಿ ಸುಮಾರು 6 ಲಕ್ಷ 33 ಸಾವಿರ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದು, ಅದರಲ್ಲಿ

ಯಾವುದೇ ಲಂಚವಿಲ್ಲದೆ, ಮಧ್ಯವರ್ತಿಗಳ ಹಾವಳಿಯಿಲ್ಲದೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆ.ಇ.ಎ) ಮೂಲಕ ನೇರವಾಗಿ ಪರೀಕ್ಷೆ ಬರೆದು, ಮೆರಿಟ್ ಮತ್ತು ಮೀಸಲಾತಿ ಮೂಲಕ ಆಯ್ಕೆಯಾಗಿರುವ 1000 ಅಭ್ಯರ್ಥಿಗಳು ಪುಣ್ಯವಂತರು ಎಂದರು.

<><><>

**ಭೂ ಸುರಕ್ಷಾ ಯೋಜನೆಯಡಿ 19 ಕೋಟಿಗೂ ಹೆಚ್ಚು ಪುಟಗಳ ಭೂ** ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ. ಅದೇ ರೀತಿ ಭೂ ಆಸ್ತಿಗೆ ಮಾಲಿಕರ ಆಧಾರ್ ಜೋಡಣೆ, ಸ್ವಯಂಚಾಲಿತ ಮ್ಯುಟೇಷನ್, ಕಾಗದ ರಹಿತ ಇ–ಆಫೀಸ್, ಆಪ್ ಆಧಾರಿತ ಬರಖಾಸ್ತು, ಪೋಡಿ, ಬಗರ್ ಹುಕುಂ ಮತ್ತು ಸರ್ಕಾರಿ ಭೂಮಿಗಳ ಸಂರಕ್ಷಣೆ ಮಾಡಲಾಗುವುದು ಎಂದು ಕಂದಾಯ ಖಾತೆ ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ. ಗ್ರಾಮ ಆಡಳಿತ ಅಧಿಕಾರಿಗಳ ನೇಮಕಾತಿ ಆದೇಶ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು; ತಕ್ಷಣದಿಂದಲೇ ಆನ್‌ಲೈನ್ ಅರ್ಜಿ ಸಲ್ಲಿಕೆಗೆ ಚಾಲನೆ ನೀಡಲಾಗುವುದು. ಪಹಣಿ ಮತ್ತು ಮ್ಯುಟೇಷನ್ ಮಾಡಲು 30 ದಿನ ತೆಗೆದುಕೊಳ್ಳಲಾಗುತ್ತಿತ್ತು. ಆದರೆ ಈಗ 12 ಗಂಟೆಯೊಳಗೆ ಮಾಡುತ್ತಿದ್ದೇವೆ. ತಹಸೀಲ್ದಾರ್ ಕೋರ್ಟ್‌ನಲ್ಲಿ ಅವಧಿ ಮೀರಿ ಉಳಿದಿದ್ದ 10,700 ಪ್ರಕರಣಗಳಲ್ಲಿ 10,284 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದ್ದು, ಕೇವಲ 416 ಪ್ರಕರಣಗಳು ಮಾತ್ರ ಬಾಕಿ ಉಳಿದಿವೆ. ಉಪವಿಭಾಗಾಧಿಕಾರಿಗಳ ಕೋರ್ಟ್‌ನಲ್ಲಿ 69,800 ಪ್ರಕರಣಗಳು ಇದ್ದು, ಇದರಲ್ಲಿ 21 ಸಾವಿರ ಪ್ರಕರಣಗಳನ್ನು ವಿಲೇ ಮಾಡಲಾಗಿದೆ ಎಂದರು.

<><><>

**ಸರ್ಕಾರಿ ನೌಕರರು ತಮಗೆ ಒದಗಿದ ಅವಕಾಶವನ್ನು ಸದ್ಬಳಕೆ ಮಾಡಿ ಸಾರ್ವಜನಿಕರ** ಸೇವೆ ಮಾಡಿ ಜನರ ಬದುಕನ್ನು ಹಸನಾಗಿಸುವ ಕಾರ್ಯವಾಗಬೇಕು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ಅವರು ಹೇಳಿದರು. ಗದಗದಲ್ಲಿ ನಡೆದ ಸರ್ಕಾರಿ ನೌಕರರ ದಿನಾಚರಣೆ ಹಾಗೂ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಅಭಿವೃದ್ಧಿ ವಿಚಾರದಲ್ಲಿ ಎಲ್ಲರ ಸಹಕಾರ ಅಗತ್ಯ. ಅಧಿಕಾರಿಗಳಿಗೆ ಕಾನೂನು ರೀತಿಯಲ್ಲಿ ಸಾರ್ವಜನಿಕರ ಸೇವೆ ಮಾಡಲು ಸಂಪೂರ್ಣ ಸಹಕಾರ ನೀಡಲಾಗಿದೆ. ಪರಿಶ್ರಮ ಪಡದೇ ಸಾಧನೆ ಅಸಾಧ್ಯ ಎಂಬುದನ್ನು ನಾವೆಲ್ಲರು ಅರಿತುಕೊಳ್ಳಬೇಕಿದೆ ಎಂದರು.

<><><>

**ಪ್ರಜಾಪ್ರಭುತ್ವದ ಸಂಸ್ಥೆಗಳಾದ ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗ** ಸಮನ್ವಯತೆಯಿಂದ ಕೆಲಸ ಮಾಡಬೇಕು. ಹಾಗಾದಾಗ ಮಾತ್ರ ಸಮಾಜದ ಸಮಸ್ಯೆ ಬಗೆಹರಿಸಲು ಸಾಧ್ಯ. ಈ ನಿಟ್ಟಿನಲ್ಲಿ ಕಾನೂನು ಬಲ್ಲ ವಕೀಲರ ಜವಾಬ್ದಾರಿ ಹೆಚ್ಚಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರು ವಕೀಲರ ಸಂಘದ ವಾರ್ಷಿಕ ದಿನಾಚರಣೆ ಕಾರ್ಯಕ್ರಮ ಹಾಗೂ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅನ್ಯಾಯಕ್ಕೆ ಒಳಗಾದವರಿಗೆ ನ್ಯಾಯ ಕೊಡಿಸಬೇಕು. ಯಾವುದೇ ಕಾರಣಕ್ಕೂ ಅನ್ಯಾಯದ ಪರ ನಿಲ್ಲಬಾರದು. ಸಮಾಜದಲ್ಲಿ ಬದಲಾವಣೆ ತರಬೇಕಾದ ನಿಟ್ಟಿನಲ್ಲಿ ವಕೀಲರು ಪ್ರಯತ್ನ ಮಾಡಬೇಕು. ತ್ವರಿತವಾಗಿ ನ್ಯಾಯ ಸಿಗುವ ರೀತಿ ಮಾಡಬೇಕು. ನ್ಯಾಯ ವಿಳಂಬವಾದರೆ, ನ್ಯಾಯವನ್ನು ನಿರಾಕರಿಸಿದಂತೆ ಎಂಬ ಮಾತನ್ನು ನೆನಪಿಡಬೇಕು ಎಂದರು.

<><><>

**ಕಳೆದ ಕೆಲವು ವ ರ್ಗಳಿಂದ ಮನೆಹಾನಿಗೊಳಗಾದ ಸಂತ್ರಸ್ಥರಿಗೆ ವಿವಿಧ** ಕಾರಣಗಳಿಗಾಗಿ ಸರ್ಕಾರದಿಂದ ನಿಯಮಾನುಸಾರ ದೊರೆಯಬೇಕಾದ ಆರ್ಥಿಕ ನೆರವು, ಸೌಲಭ್ಯಗಳು ದೊರೆಯದಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ. ಈ ಕುರಿತು ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳ ಉಪಸ್ಥಿತಿಯಲ್ಲಿ ಶೀಘ್ರವೇ ಸಭೆ ಕರೆದು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಶಾಲಾ ಶಿಕ್ಷಣ ಹಾಗೂ ಶಿವಮೊಗ್ಗಾ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ಹೇಳಿದ್ದಾರೆ. ತ್ರೈಮಾಸಿಕ ಕೆ.ಡಿ.ಪಿ. ಪ್ರಗತಿಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರಸಕ್ತ ಶೈಕ್ಷಣಿಕ ಸಾಲಿನಿಂದಲೇ ಅನ್ವಯವಾಗುವಂತೆ ರಾಜ್ಯದ ಎಲ್ಲಾ ಪ್ರಾಥಮಿಕ ಶಾಲೆಗಳಲ್ಲಿ ಎಲ್.ಕೆ.ಜಿ. ಮತ್ತು ಯು.ಕೆ.ಜಿ. ತರಗತಿಗಳನ್ನು ಆರಂಭಿಸಲು ಅಗತ್ಯವಿರುವ ಎಲ್ಲಾ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಈ ತರಗತಿಗಳು ಅಂಗನವಾಡಿ ಕೇಂದ್ರಕ್ಕೆ ಪರ್ಯಾಯವಲ್ಲ. ಅಂಗನವಾಡಿಗಳು ಎಂದಿನಂತೆ ಕಾರ್ಯನಿರ್ವಹಿಸಲಿವೆ ಎಂದರು.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ಇಂದು, ಕರ್ನಾಟಕದ ಸಾಂಸ್ಕೃತಿಕ ನಾಯಕ ಜಗಜ್ಯೋತಿ ಶ್ರೀ ಬಸವೇಶ್ವರರ** ಜಯಂತಿ ಹಾಗೂ ಅಕ್ಷಯ ತೃತೀಯಾ ಪರ್ವ. ಹನ್ನೆರಡನೆಯ ಶತಮಾನದ ಸಮಾಜ ಸುಧಾರಕ, ತತ್ವಶಾಸ್ತ್ರಜ್ಞ, ಅನುಭವ ಮಂಟಪದ ಮೂಲಕ ಸಮಾನತೆ ಹಾಗೂ ವಚನಗಳ ಮೂಲಕ ಅರಿವಿನ ಬೆಳಕನ್ನು ಮೂಡಿಸಿದ ಮಹಾನುಭಾವ ಶ್ರೀ ಬಸವೇಶ್ವರರು. ನಾಡಿನೆಲ್ಲೆಡೆ ಬಸವಣ್ಣನವರ ಹಿರಿಮೆಯನ್ನು ಸಾರುವ ಹಲವು ಕಾರ್ಯಕ್ರಮಗಳು ಆಯೋಜಿತವಾಗಿವೆ. ವಚನ ಸಾಹಿತ್ಯವು ಸಾಮಾಜಿಕ, ಧಾರ್ಮಿಕ, ಮನೋ ವೈಜ್ಞಾನಿಕ ಮೌಲ್ಯಗಳನ್ನು ಹೊಂದಿದ್ದು, ಕನ್ನಡ ಸಾಹಿತ್ಯ ಪ್ರಪಂಚಕ್ಕೆ ಹೊಸ ಅಸ್ಮಿತೆಯನ್ನು ದೊರಕಿಸಿಕೊಟ್ಟಿವೆ. ಬಸವಣ್ಣ ಹಾಗೂ ಶಿವಶರಣರ ವಚನಗಳು ಭಾವೀ ಸಮೂಹಕ್ಕೆ ದಾರಿದೀಪವಾಗಿದ್ದು, ವರ್ತಮಾನದ ಜಟಿಲ ಸಮಸ್ಯೆಗಳಿಗೆ ಉತ್ತರ ನೀಡುತ್ತವೆ ಎಂದು ಡಾಕ್ಟರ್ ಎಂ.ಎಂ ಕಲಬುರಗಿ ರಾಷ್ಟ್ರೀಯ ಪ್ರತಿ ಠಾನದ ಅಧ್ಯಕ್ಷ, ಸಂಶೋಧಕ, ಧಾರವಾಡದ ಡಾಕ್ಟರ್ ವೀರಣ್ಣ ರಾಜೂರ್ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

**ಬೈಟ್: ಡಾ. ವೀರಣ್ಣ ರಾಜೂರ**

<><><>

**ಧಾರವಾಡ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ** ಸಹಯೋಗದಲ್ಲಿ ಕರ್ನಾಟಕ ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರ ಜಯಂತಿಯ ಪ್ರಯುಕ್ತ ಧಾರವಾಡ ಕಲಾಭವನ ಆವರಣದಲ್ಲಿರುವ ಶ್ರೀ ಬಸವೇಶ್ವರ ಪ್ರತಿಮೆಗೆ ಗಣ್ಯರು ಮಾಲಾರ್ಪಣೆ ಮಾಡಲಿದ್ದಾರೆ. ನಂತರ ಉಳವಿ ಚನ್ನಬಸವೇಶ್ವರ ಟ್ರಸ್ಟ್‌ವತಿಯಿಂದ ಬಸವೇಶ್ವರರ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಸಂಜೆ 5 ಗಂಟೆಗೆ ಕರ್ನಾಟಕ ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರ ಜಯಂತಿಯ ವೇದಿಕೆ ಕಾರ್ಯಕ್ರಮವನ್ನು ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಭಾ ಭವನದಲ್ಲಿ ಆಯೋಜಿಸಲಾಗಿದೆ.

<><><>

**ದೇಶದ ಭದ್ರತೆಯ ವಿಚಾರದಲ್ಲಿ ಯಾವುದೇ ರಾಜಿ ಇಲ್ಲ ಎಂದು ಗೃಹ ಖಾತೆ ಸಚಿವ** ಡಾಕ್ಟರ್ ಜಿ.ಪರಮೇಶ್ವರ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು; ಈ ಸಂಬಂಧ ಕೇಂದ್ರ ಸರ್ಕಾರ ಕೈಗೊಳ್ಳುವ ತೀರ್ಮಾನಗಳಿಗೆ ಪಕ್ಷಾತೀತವಾಗಿ ಬೆಂಬಲ ಸೂಚಿಸುವ ಅಗತ್ಯವಿದೆ. ದೇಶದ ರಕ್ಷಣೆ ಪ್ರತಿಯೊಬ್ಬರ ಹೊಣೆಯಾಗಿದೆ ಎಂದರು.ಇತ್ತೀಚಿಗೆ ನಡೆದ ಸರ್ವಪಕ್ಷಗಳ ಸಭೆಯಲ್ಲೂ ತಮ್ಮ ಪಕ್ಷ ಕೇಂದ್ರ ಸರ್ಕಾರ ಕೈಗೊಳ್ಳುವ ನಿರ್ಧಾರಕ್ಕೆ ಬದ್ಧ ಎನ್ನುವ ವಿಚಾರ ತಿಳಿಸಿದೆ. ಭಯೋತ್ಪಾದಕ ಚಟುವಟಿಕೆಗಳನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದರು.

<><><>

**ಯಾವ ಕ್ಷೇತ್ರದಲ್ಲಿ ಉದ್ಯೋಗಗಳಿಗೆ ಹೆಚ್ಚಿನ ಬೇಡಿಕೆ ಇದೆಯೋ ಆ ಕ್ಷೇತ್ರಗಳಲ್ಲಿ** ವಿದ್ಯಾರ್ಥಿಗಳನ್ನು ಕೌಶಲ್ಯಸಹಿತವಾಗಿ ಸಜ್ಜುಗೊಳಿಸಲು ಪದವಿ ಹಂತದಲ್ಲೇ ಕ್ರಮ ಕೈಗೊಳ್ಳುವ ಮೂಲಕ ಉನ್ನತ ಶಿಕ್ಷಣ ಇಲಾಖೆಯಲ್ಲಿ ಹಲವು ಬದಲಾವಣೆಗಳನ್ನು ತರಲಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಿರ್ಮಾಣ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ಕಳೆದ ಎರಡು ವ ರ್ಗಳಲ್ಲಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ಹಲವಾರು ಬದಲಾವಣೆಗಳನ್ನು ತರುವ ಪ್ರಯತ್ನ ಮಾಡಲಾಗಿದೆ. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಸ್ತುತ ಸ್ಪರ್ಧಾತ್ಮಕ ಯುಗದಲ್ಲಿ ಹೊಸದಾಗಿ ಹೆಚ್ಚು ಬೇಡಿಕೆ ಇರುವ ಕೋರ್ಸ್‌ಗಳಿಗೆ ಆದ್ಯತೆ ನೀಡಲಾಗುತ್ತಿದೆ. 2023–24 ನೇ ಸಾಲಿನಲ್ಲಿ 21 ಸಾವಿರ ಹೊಸ ಪ್ರವೇಶಾತಿಗಳಿಗೆ ಅವಕಾಶ ನೀಡಲಾಗಿದೆ ಎಂದರು.

<><><>

**ರಾಜ್ಯಾದ್ಯಂತ ಮಾಹಿತಿ ಸಂಗ್ರಹಿಸಿ ಬರುವ ಸೆಪ್ಟೆಂಬರ್ ವೇಳೆಗೆ ಪ್ರಾದೇಶಿಕ** ಅಸಮತೋಲನ ನಿವಾರಣೆ ಕುರಿತು ಶಿಫಾರಸು ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಕರ್ನಾಟಕ ಪ್ರಾದೇಶಿಕ ಅಸಮತೋಲನಾ ನಿವಾರಣಾ ಸಮಿತಿ ಅಧ್ಯಕ್ಷ ಹಾಗೂ ಆರ್ಥಿಕ ತಜ್ಞ ಪ್ರೊ ಎಂ.ಗೋವಿಂದ ರಾವ್ ಹೇಳಿದ್ದಾರೆ. ದಾವಣಗೆರೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸಂವಾದ ಸಭೆ ಹಾಗೂ ಸಾರ್ವಜನಿಕ ಶಿಫಾರಸು ಸ್ವೀಕಾರ ಸಭೆಯಲ್ಲಿ ಅವರು ಮಾತನಾಡಿದರು.

<><><>

**ಸಂಕ್ಷಿಪ್ತ ಸುದ್ದಿ**

<><><>

**ವಿಜಯಪುರ ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಕಟ್ಟುನಿಟ್ಟಿನ ಕ್ರಮ** ವಹಿಸುವಂತೆ ಜಿಲ್ಲಾಧಿಕಾರಿ ಟಿ. ಭೂಬಾಲನ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><><>

**ಇದೇ ತಿಂಗಳು ನಿವೃತ್ತಿಯಾಗಲಿರುವ ರಾಜ್ಯ ಪೊಲೀಸ್ ಮಹಾ ನಿರ್ದೇಶಕ** ಅಲೋಕ್ ಮೋಹನ್ ಅವರ ಅವಧಿಯನ್ನು ಮೇ 21ರವರೆಗೆ ವಿಸ್ತರಣೆ ಮಾಡಿ ಸರಕಾರ ಆದೇಶ ಹೊರಡಿಸಿದೆ.

<><><>

**ಮಲೆಮಹದೇಶ್ವರ ಬೆಟ್ಟದಲ್ಲಿ ಜರುಗಿದ ವಿಶೇ ʼ ಸಚಿವ ಸಂಪುಟ ಸಭೆಯ ವೇಳೆ** ಮುಖ್ಯಮಂತ್ರಿಗಳಲ್ಲಿ ವಿಜಯಪುರದಲ್ಲೂ ವಿಶೇ ʼ ಸಂಪುಟ ಸಭೆ ನಡೆಸುವಂತೆ ವಿನಂತಿ ಮಾಡಿರುವುದಾಗಿ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ.

<><><><><>